## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 1342 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:25-07-2019.

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿಗಳು ಪ್ರತಿ ವರ್ಷ ಡಿಸೆಂಬರ್ ತಿಂಗಳಿನಲ್ಲಿ ವಿಕಲಚೇತನರ ಸಮನ್ವಯ ಗ್ರಾಮ ಸಭೆಗಳನ್ನು ಹಮ್ಮಿಕೊಳ್ಳುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 223 ಜಿಪಸ 2018, ದಿನಾಂಕ: 28-05-2019.

*******

ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಸಂರಕ್ಷಣೆ, ಸಮಾನ ಅವಕಾಶ ಮತ್ತು ಪೂರ್ಣ ಭಾಗವಹಿಸುವಿಕೆಗಾಗಿ ಭಾರತ ಸರ್ಕಾರವು ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ, 2016 ಜಾರಿಗೆ ಬಂದಿರುತ್ತದೆ. ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗೆ ಶೇ. 3 ಬದಲಾಗಿ ಶೇ. 5 ರಷ್ಟು ಅನುದಾನವನ್ನು ಗ್ರಾಮ ಪಂಚಾಯತಿ ಸ್ವಂತ ಅನುದಾನದಲ್ಲಿ ಮೀಸಲಿರಿಸಿ ಮಾರ್ಗಸೂಚಿಗಳನ್ವಯ ವಿನಿಯೋಗಿಸಲು ಕ್ರಮ ವಹಿಸುವಂತೆ ತಿಳಿಸಲಾಗಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 3-ಜಿ ರಲ್ಲಿ ಗ್ರಾಮ ಪಂಚಾಯತಿಗಳು ಗ್ರಾಮ ಸಭಾದ ಸಭೆಗಳನ್ನು ನಡೆಸಲು ತಿಳಿಸಲಾಗಿದೆ. ಅದರಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಸಭೆ ಕರೆಯುವ ಮತ್ತು ನಡೆಸುವ) ನಿಯಮಗಳು, 2017 ಅನ್ನು ರೂಪಿಸಲಾಗಿದೆ. ಗ್ರಾಮ ಸಭಾವು ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಜಾರಿಗೊಳಿಸುವಾಗ ವಿಕಲಚೇತನರ ಎಲ್ಲಾ ಚಟುವಟಿಕೆಗಳಿಗೆ ಬೆಂಬಲ ನೀಡಬೇಕಾಗಿರುತ್ತದೆ. ಗ್ರಾಮ ಪಂಚಾಯತಿ ಮಟ್ಟದಲ್ಲಿ ಕ್ರಿಯಾ ಯೋಜನೆಯನ್ನು ರೂಪಿಸಲು ವಿಕಲಚೇತನರ ಸಮನ್ವಯ ಗ್ರಾಮ ಸಭೆಗಳು ಪ್ರಮುಖ ಪಾತ್ರ ವಹಿಸಬೇಕಾಗಿದೆ. ಪ್ರತಿ ವರ್ಷ ಡಿಸೆಂಬರ್-3 ರಂದು ವಿಶ್ವ ಅಂಗವಿಕಲರ ದಿನಾಚರಣೆಯನ್ನು ಕರ್ನಾಟಕ ಸರ್ಕಾರವು ಆಚರಿಸುತ್ತಿದೆ.

ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗೆ ಪರಿಣಾಮಕಾರಿ ಕ್ರಿಯಾ ಯೋಜನೆಗಳನ್ನು ರೂಪಿಸಲು ಗ್ರಾಮ ಪಂಚಾಯತಿ ಹಂತದ ಪುನರ್ ವಸತಿ ಕಾರ್ಯಕರ್ತರು (VRW) ಮತ್ತು ತಾಲ್ಲೂಕು ಹಂತದ ವಿವಿಧೋದ್ದೇಶದ (MRW) ಮರು ವಸತಿ ಕಾರ್ಯಕರ್ತರ ರವರುಗಳನ್ನು ವಿಕಲಚೇತನರಾಗಿ ಆಯೋಜಿಸುವ ವಿಶೇಷ ಗ್ರಾಮ ಸಭೆಗೆ ಆಹ್ವಾನಿಸಬೇಕು ಮತ್ತು ಅವರುಗಳ ನೆರವು ಮಾಡಿಕೊಳ್ಳುವುದು.

/

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲೆಗಳ ವ್ಯಾಪ್ತಿಯಲ್ಲಿನ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ, ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಡ್ಡಾಯವಾಗಿ ಪ್ರತಿ ವರ್ಷ ಡಿಸೆಂಬರ್ ತಿಂಗಳಿನಲ್ಲಿ ವಿಕಲಚೇತನರ ಸಮನ್ವಯ ಗ್ರಾಮ ಸಭೆಗಳನ್ನು ಹಮ್ಮಿಕೊಳ್ಳುವಂತೆ ಸೂಕ್ತ ನಿರ್ದೇಶನ ನೀಡುವಂತೆ ತಿಳಿಸಿದೆ.

Narayana DG
3/9/19

(ಡಿ.ಜಿ. ನಾರಾಯಣ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ, (ಗ್ರಾ.ಪಂ.)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1) ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. ಬಹುಮಹಡಿ ಕಟ್ಟಡ, ಬೆಂಗಳೂರು.
2) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
4) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.